# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1862** |
| ಸದಸ್ಯರ ಹೆಸರು | : | ಶ್ರೀ ಡಿ.ಎಸ್.ಅರುಣ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 23-03-2026 |
| ಉತ್ತರಿಸುವ ಸಚಿವರು | | ಮಾನ್ಯ ಇಂಧನ ಸಚಿವರು |

****

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಅಸ್ತಿತ್ವದಲ್ಲಿರುವ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ಕೋರಿ ಅರ್ಜಿ ಸಲ್ಲಿಸಿರುವ ನಾಗರೀಕರಿಗೆ ನಿವೇಶನ ಅಥವಾ ಕಟ್ಟಡದ ವಿಸ್ತೀರ್ಣವನ್ನು ಪರಿಗಣಿಸದೆ, ಗುರುತಿನ ಚೀಟಿ ಮತ್ತು ಮಾಲೀಕತ್ವದ ಪುರಾವೆಗಳ ಆಧಾರದ ಮೇಲೆ ವಿದ್ಯುತ್ ಸಂಪರ್ಕ ನೀಡಲು ಸರ್ಕಾರ ನಿಯಮಗಳನ್ನು ಸಡಿಲಿಸಲು ಸಿದ್ಧವಿದೆಯೇ: | ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಯಲ್ಲಿ ವಿದ್ಯುತ್ ಸಂಪರ್ಕ ಕೋರಿ ಸಲ್ಲಿಸಲಾಗುವ ಎಲ್ಲಾ ಅರ್ಜಿಗಳಿಗೆ ಕೆಳಕಂಡ ನಿಯಮ / ಆದೇಶಗಳನುಸಾರ ವಿದ್ಯುತ್ ಸಂಪರ್ಕ ಕಲ್ಪಿಸಲಾಗುತ್ತಿದೆ.<br>1) KERC Conditions of Supply ನ ನಿಯಮಾವಳಿ ಮತ್ತು ಕಾಲಕಾಲಕ್ಕೆ ಹೊರಡಿಸಿರುವ ತಿದ್ದುಪಡಿಗಳು.<br>2) ವಿದ್ಯುತ್ ಸಂಪರ್ಕ ಕಲ್ಪಿಸುವ ಸಂಬಂಧ ಮಾನ್ಯ ಸರ್ವೋಚ್ಚ ನ್ಯಾಯಾಲಯದ ದಿನಾಂಕ:17.12.2024 ರ Civil Appeal No.14604 & 14605 of 2024 ತೀರ್ಪಿನ ಅನುಸಾರ, KERC ದಿನಾಂಕ:13.03.2025 ರಂದು ನೀಡಿರುವ ನಿರ್ದೇಶನ.<br>3) ನಗರಾಭಿವೃದ್ಧಿ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳು 1200 ಚದರ ಅಡಿಗಳ ವಿಸ್ತೀರ್ಣದವರೆಗಿನ ನಿವೇಶನಗಳಲ್ಲಿ ನಿರ್ಮಿಸಲಾಗಿರುವ ನೆಲ + 2 ಅಂತಸ್ತು ಅಥವಾ ಸ್ಟಿಲ್ಟ್ + 3 ಅಂತಸ್ತಿನವರೆಗಿನ ವಸತಿ ಕಟ್ಟಡಗಳಿಗೆ ಸ್ವಾಧೀನಾನುಭವ ಪತ್ರ (occupancy certificate) ಪಡೆಯುವುದರಿಂದ ವಿನಾಯಿತಿ ನೀಡಿರುವ ಆದೇಶಗಳು. |
| ಆ) | ದೀರ್ಘಕಾಲದಿಂದ ವಾಸಿಸುತ್ತಿರುವ ಮನೆಗಳಿಗೆ ದಾಖಲೆಗಳ ತಾಂತ್ರಿಕ ಅಡಚಣೆಗಳನ್ನು ಕಾರಣವಾಗಿ ವಿದ್ಯುತ್ ಸಂಪರ್ಕ ನಿರಾಕರಿಸಲಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಇದಕ್ಕೆ ಶಾಶ್ವತ ಪರಿಹಾರ ಕಲ್ಪಿಸಲು ಯಾವ ಕ್ರಮ ಕೈಗೊಳ್ಳಲಾಗುತ್ತಿದೆ; (ಸಂಪೂರ್ಣ ವಿವರ ಒದಗಿಸುವುದು) | |
| ಇ) | ಅಸ್ತಿತ್ವದಲ್ಲಿರುವ ಕಟ್ಟಡಗಳಿಗೆ ಒಮ್ಮೆ ಮಾತ್ರ ವಿಶೇಷ ಅವಕಾಶ" (One Time Settlement) ಯೋಜನೆಯಡಿ ವಿದ್ಯುತ್ ಸಂಪರ್ಕ ನೀಡುವ ಕುರಿತು ಸರ್ಕಾರ ಯಾವುದಾದರೂ ನೀತಿ ರೂಪಿಸುತ್ತಿದೆಯೇ; (ವಿವರ ಒದಗಿಸುವುದು) | ಅಸ್ತಿತ್ವದಲ್ಲಿರುವ ಕಟ್ಟಡಗಳಿಗೆ ಒಮ್ಮೆ ಮಾತ್ರ ವಿಶೇಷ ಅವಕಾಶ" (One Time Settlement) ಯೋಜನೆಯಡಿ ಸ್ವಾಧೀನಾನುಭವ ಪತ್ರ (occupancy certificate) ಪಡೆಯುವುದರಿಂದ ನಗರಾಭಿವೃದ್ಧಿ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳು ವಿನಾಯಿತಿ ನೀಡಿ ಆದೇಶಿಸಿದಲ್ಲಿ ಅದರಂತೆ, ಪರಿಶೀಲಿಸಿ ಕ್ರಮವಹಿಸಲಾಗುವುದು. |
| ಈ) | ವಿದ್ಯುತ್ ಸಂಪರ್ಕ ಪಡೆಯುವ ಪ್ರಕ್ರಿಯೆಯನ್ನು ಸರಳಗೊಳಿಸಿ ಸಾರ್ವಜನಿಕರಿಗೆ ತ್ವರಿತ ಸೇವೆ ಒದಗಿಸಲು ರಾಜ್ಯಾದ್ಯಂತ ಏಕೀಕೃತ ಮಾರ್ಗಸೂಚಿಗಳನ್ನು ಜಾರಿಗೆ ತರಲು ಸರ್ಕಾರ ಕ್ರಮ ಕೈಗೊಳ್ಳುವುದೇ? | |

ಸಂಖ್ಯೆ: ಎನರ್ಜಿ 104 ಇಬಿಎಸ್ 2026

(ಕೆ.ಜೆ.ಜಾರ್ಜ್)
ಇಂಧನ ಸಚಿವರು